# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಗ್ರಾಮೀಣ ಅಂಬೇಡ್ಕರ್ ಯೋಜನೆಯಡಿಯಲ್ಲಿ ಘಟಕ ವೆಚ್ಚವನ್ನು ರೂ.20,000/- ಗಳಿಂದ ರೂ.30,000/- ಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:- 1) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಪವಕನಿ/ಗಿಉಯೋ/ ಸಿಆರ್/67/07-08, ದಿನಾಂಕ 17-10-2007.

2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ ಸಕನಿ/ಪಜಾಉಯೋ-2/ಸಿಆರ್-1/2007-08, ದಿನಾಂಕ: 09-10-2007.

3) ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಎಂಡಿ/ಆರ್‌ಜಿಆರ್‌ಹೆಚ್‌ಸಿಎಲ್/ 01/ ಎಹೆಚ್‌ಎಸ್/02/2007, ದಿನಾಂಕ 22-10-2007.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು ಇವರು 2007-08ನೇ ಸಾಲಿನಲ್ಲಿ ಗಿರಿಜನ ಉಪಯೋಜನೆಯಡಿ ಈಗಾಗಲೇ ಅನುಷ್ಠಾನಗೊಳಿಸಿರುವ ಗ್ರಾಮೀಣ ಆಶ್ರಯ ಯೋಜನೆಯ ರೀತಿಯಲ್ಲಿ, ಗ್ರಾಮೀಣ ಅಂಬೇಡ್ಕರ್ ವಸತಿ ಯೋಜನೆಯಡಿ ಪರಿಶಿಷ್ಟ ವರ್ಗದ ಹೆಚ್ಚಿನ ಜನಸಂಖ್ಯೆಯುಳ್ಳ ಗ್ರಾಮಗಳನ್ನು ಆಯ್ಕೆ ಮಾಡಿ, ಗ್ರಾಮೀಣ ಆಶ್ರಯ ಯೋಜನೆಯ ನಿಯಮಗಳಂತೆ ಘಟಕ ವೆಚ್ಚವನ್ನು ರೂ.30,000/-ಗಳಿಗೆ ಸರ್ಕಾರದ ಆದೇಶ ಪಡೆದು ಒಟ್ಟು 5000 ಮನೆಗಳನ್ನು ನಿರ್ಮಿಸಲು ನಿಗಮಕ್ಕೆ ಅನುಮತಿ ನೀಡಲಾಗಿದೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು 2006-07ನೆ ಸಾಲಿಗೆ ಈಗಾಗಲೇ ಅನುಷ್ಠಾನಗೊಳಿಸಿರುವ ಗ್ರಾಮೀಣ ಆಶ್ರಯ ಯೋಜನೆಯ ರೀತಿಯಲ್ಲಿ, ಗ್ರಾಮೀಣ ಅಂಬೇಡ್ಕರ್ ವಸತಿ ಯೋಜನೆಯಡಿ ಪರಿಶಿಷ್ಟ ಜಾತಿಯ ಹೆಚ್ಚಿನ ಜನಸಂಖ್ಯೆಯುಳ್ಳ ಗ್ರಾಮಗಳನ್ನು ಆಯ್ಕೆ ಮಾಡಿ, ಗ್ರಾಮೀಣ ಆಶ್ರಯ ಯೋಜನೆಯ ನಿಯಮಗಳಂತೆ ಘಟಕ ವೆಚ್ಚವನ್ನು ರೂ. 20,000/- ಗಳಿಂದ ರೂ.30,000/-ಗಳಿಗೆ ಹೆಚ್ಚಿಸಿ ಸರ್ಕಾರದ ಆದೇಶ ಪಡೆದು ಒಟ್ಟು ಗುರಿ 13,333 ಮನೆಗಳನ್ನು ನಿರ್ಮಿಸಲು ಅನುಮತಿ ನೀಡಲಾಗಿದೆ ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತವು 2007-08ನೆ ಸಾಲಿನ ಗ್ರಾಮೀಣ ಅಂಬೇಡ್ಕರ್ ಯೋಜನೆಯಡಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ 13,333 ಮನೆಗಳಿಗೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ ಇಲಾಖೆಯಿಂದ 5,000 ಮನೆಗಳಿಗೆ ಅನುಮೋದನೆ ಪಡೆದಿರುವುದರಿಂದ ಹಾಗೂ 17,224 ಫಲಾನುಭವಿಗಳಿಗೆ ಅನುಮೋದನೆ ನೀಡಿರುವುದರಿಂದ ಕೂಡಲೇ 2007-08ನೇ ಗ್ರಾಮೀಣ ಅಂಬೇಡ್ಕರ್ ಯೋಜನೆಯಡಿಯಲ್ಲಿ ಘಟಕ ವೆಚ್ಚವನ್ನು ರೂ.20,000/-ಗಳಿಂದ ರೂ.30,000/-ಗಳಿಗೆ ಹೆಚ್ಚಿಸುವಂತೆ ಕೋರಿರುತ್ತಾರೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರದ ಆದೇಶ ಸಂ. ವಇ 260 ಹೆಚ್‌ಎಎಸ್ 2007, ಬೆಂಗಳೂರು, ದಿನಾಂಕ: 30-07-08**

2007-08ನೇ ಸಾಲಿನಲ್ಲಿ ಗ್ರಾಮೀಣ ಅಂಬೇಡ್ಕರ್ ಯೋಜನೆಯಡಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ 13,333 ಮನೆಗಳನ್ನು ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ ಇಲಾಖೆಯಿಂದ 5000 ಮನೆಗಳಿಗೆ ಅನುಮೋದನೆ ನೀಡಲಾಗಿರುವ ಕಾರಣ ಗ್ರಾಮೀಣ ಅಂಬೇಡ್ಕರ್ ಯೋಜನೆಯ ಮನೆಗಳ ಘಟಕ ವೆಚ್ಚವನ್ನು ರೂ.20,000/- ಗಳಿಂದ ರೂ. 30,000/-ಗಳಿಗೆ ಹೆಚ್ಚಿಸಲಾಗಿದೆ.

ಈ ಆದೇಶವನ್ನು, ಸಮಾಜ ಕಲ್ಯಾಣ ಇಲಾಖೆ ವತಿಯಿಂದ, ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹೊರಡಿಸಲಾಗಿರುವ ಆದೇಶ ಸಂ: ಸಕಇ/40/ಎಸ್‌ಎಲ್‌ಪಿ/07, ದಿನಾಂಕ 22-06-2007 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

( ರಂಗಮ್ಮ)
ಪೀಠಾಧಿಕಾರಿ-2, ವಸತಿ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು, (ಎ ಮತ್ತು ಇ)(ಆಡಿಟ್1ಮತ್ತು 2)
2. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಹುಸೂರು ಖಜಾನೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ -9)
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ, ಆಪ್ತ ಕಾರ್ಯದರ್ಶಿ, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಸತಿ ಇಲಾಖೆ,
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು